ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು).—

ಅ) ಮೇಜಿನ ಮೇಲೆ ಇಡಲಾಗಿದೆ.

ಆ) ರೂ. ಶೂನ್ಯ, ೨೯.೬೦೦-೦೦

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

೧೯೯೦-೯೧ ನೇ ಶೈಕ್ಷಣಿಕ ವರ್ಷದಲ್ಲಿ ಹೊಸ ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ.

(೬೪೦) ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಶಿಕ್ಷಣ ಯುವಜನ ಸೇವಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.—

೧) ೧೯೯೦-೯೧ ನೇ ಶೈಕ್ಷಣಿಕ ವರ್ಷದಲ್ಲಿ ಹೊಸ ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರದಲ್ಲಿ ಸ್ವೀಕೃತಿಯಾದ ಅರ್ಜಿಗಳ ಸಂಖ್ಯೆ ಎಷ್ಟು ;

೨) ಈ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿತ ಸ್ಥಳಗಳಾವುವು ;

೩) ಅನುಮೋದಿಸಿದ ಅರ್ಜಿಗಳ ಸಂಖ್ಯೆ ಎಷ್ಟು ;

೪) ಈ ಹೊಸ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿ ಪ್ರಮಾಣ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣಯುವಜನ ಸೇವಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

೧. ೧) ಸಂಸ್ಥೆಗಳಿಂದ ನೇರವಾಗಿ ಬಂದ ಅರ್ಜಿಗಳ ಸಂಖ್ಯೆ ೨.

೨) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಕಾಯ್ದೆ ಪ್ರಕರಣ ೫೩ ರಂತೆ ಬಂದಿರುವ ಪ್ರಸ್ತಾವನೆ ಅರ್ಜಿಗಳ ಸಂಖ್ಯೆ ೨.

೨. ೧) ಯಾದಗೀರ್
೨) ಕೋಲಾರ
೩) ದೇವರಹಟ್ಟಿ
೪) ಬೆಳಗಾಂ

೩) ಮೊದಲನೆ (ಯಾದಗೀರ್‌ನ) ಅರ್ಜಿದಾರರಿಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಕಾಯ್ದೆ ಪ್ರಕರಣ ೫೩ ರಂತೆ ಮೊದಲು ವಿಶ್ವವಿದ್ಯಾನಿಲಯಕ್ಕೆ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಉಳಿದ ಪ್ರಸಾವನೆಗಳು ಪರಿಶೀಲನೆಯಲ್ಲಿವೆ.

೪) ಮೇಲಿನ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

೧೯೯೦-೯೧ ನೇ ಸಾಲಿನಲ್ಲಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸುವ ಬಗ್ಗೆ

೫೫೩. ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ .—

ಅ) ೧೯೯೦-೯೧ ನೇ ಸಾಲಿನಲ್ಲಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಎಷ್ಟು ಅರ್ಜಿಗಳು ಸರ್ಕಾರಕ್ಕೆ ಬಂದಿದೆ;

ಆ) ಅವುಗಳಲ್ಲಿ ಬೆಂಗಳೂರು ನಗರದಿಂದ ಎಷ್ಟು ಅರ್ಜಿಗಳಿರುತ್ತವೆ ;

ಇ) ೧೯೯೦-೯೧ ನೇ ಶೈಕ್ಷಣಿಕ ವರ್ಷದಲ್ಲಿ ಹೊಸ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿದೆಯೇ ;

ಈ) ಹಾಗಿದ್ದಲ್ಲಿ ಅಂತಹಾ ಸಂಸ್ಥೆಗಳ ಹೆಸರು ಮತ್ತು ಯಾವ ಸ್ಥಳದಲ್ಲಿ ಈ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲಾಗುವುದು ?

ಶ್ರೀ ಕೆ. ಹೆಚ್. ರಂಗನಾಥ (ಶಿಕ್ಷಣ ಯುವಜನ ಸೇವಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಯಾವುದೂ ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) –ಅದೇ–

ಈ) –ಅದೇ–

ಅಧ್ಯಕ್ಷರು.—ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸಲಾಯಿತು. ಈಗ ಸಾರಿಗೆ ರಾಜ್ಯ ಮಂತ್ರಿಗಳು ಸಭೆಯ ಮುಂದೆ ಕಾಗದ ಪತ್ರಗಳನ್ನು ಮಂಡಿಸುವುದು.

ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಕೆ. ಜೆ. ಜಾರ್ಜ್ (ಸಾರಿಗೆ ರಾಜ್ಯ ಸಚಿವರು).— ಮಾನ್ಯ ಅಧ್ಯಕ್ಷರೆ, ೧೯೫೦ನೇ ಇಸವಿಯ ಕಂಪನಿ ಶಾಸನದ ೩೫ (೨)ನೇ ಕಲಮಿನ ಮೇರೆಗೆ ೧೯೮೮–೮೯ನೇ ಸಾಲಿನ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ೨೮ನೇ ವಾರ್ಷಿಕ, ಆಡಳಿತ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಸಭಾಧ್ಯಕ್ಷರು.— ೧೯೮೮–೮೯ನೇ ಸಾಲಿನ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ೨೮ನೇ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸಲಾಯಿತು.

ರಾಯಚೂರು, ಬೀದರ್, ಗುಲ್ಬರ್ಗ ಭಾಗಗಳಲ್ಲಿ ವಿಪರೀತ ಮಳೆಯಿಂದಾಗಿ ಆಗಿರುವ ಹಾನಿಯ ಬಗ್ಗೆ

ಶ್ರೀ ಪಿ. ಜಿ. ಆರ್. ಸಿಂಧ್ಯ (ವಿರೋಧ ಪಕ್ಷದ ಉಪ ನಾಯಕರು).— ಮಾನ್ಯ ಅಧ್ಯಕ್ಷರೆ, ಒಂದು ವಿಷಯವನ್ನು ಸರ್ಕಾರದ ಗಮನಕ್ಕೆ ತರಬೇಕೆಂದು ತಮ್ಮ ಜೊತೆಯಲ್ಲಿ ಈಗಾಗಲೇ ಚರ್ಚೆ ಮಾಡಿದ್ದೇನೆ. ಶುಕ್ರವಾರ ಈ ಸದನದಲ್ಲಿ ಚರ್ಚೆಯಾದಂತೆ ರಾಯಚೂರು, ಬೀದರ್, ಗುಲ್ಬರ್ಗ ಭಾಗಗಳಲ್ಲಿ ವಿಪರೀತವಾಗಿ ಮಳೆಯಾಗಿ ಹಾನಿಯಾಗಿದೆ. ಶುಕ್ರವಾರ ಮಾನ್ಯ ಮುಖ್ಯಮಂತ್ರಿಗಳು ಒಬ್ಬ ಮಂತ್ರಿಗಳನ್ನು ಆ ಭಾಗಕ್ಕೆ ಭೇಟಿ ಕೊಟ್ಟು ಬರಲು ಕಳುಹಿಸುತ್ತೇನೆಂದು ಹೇಳಿದ್ದರು. ಆ ಪ್ರಕಾರ ಒಬ್ಬ ಮಂತ್ರಿಗಳು ಹೋಗಿದ್ದಾರೆಂದು ಪತ್ರಿಕೆಗಳಲ್ಲಿ ಸುದ್ದಿ ಬಂದಿದೆ. ನಾಲ್ಕು ಕೋಟಿ ರೂಪಾಯಿಗಳಿಗಿಂತ ಹೆಚ್ಚು ಹಾನಿಯಾಗಿದೆಯೆಂದೂ ಅಲ್ಲಿನ ಜನಗಳಿಗೆ ತೊಂದರೆಯಾಗಿದೆಯೆಂದು ಸುದ್ದಿ ಪತ್ರಿಕೆಗಳಲ್ಲಿ ಪ್ರಕಟವಾಗಿದೆ. ಸಚಿವರು ತಮ್ಮಲ್ಲಿ ವಿನಂತಿ ಮಾಡಿಕೊಳ್ಳುವುದೆ ನೆಂದರೆ ಇದು ಮಹತ್ವವಾದ ವಿಚಾರ. ಇದು ಸದನದಲ್ಲಿ ಚರ್ಚೆಯಾಗಬೇಕು. ಮಾನ್ಯ ಮಂತ್ರಿಗಳು ಸ್ಥಳಕ್ಕೆ ಭೇಟಿ ಕೊಟ್ಟು ಬಂದಿರುವುದರಿಂದ ಸರ್ಕಾರದ ಪರವಾಗಿ ಒಂದು ಹೇಳಿಕೆಯನ್ನು ಕೊಡಬೇಕೆಂದು ಕೇಳಿ ಕೊಳ್ಳುತ್ತೇನೆ.

ಅಧ್ಯಕ್ಷರು.— ಪ್ರಕೃತಿಯ ವಿಕೋಪಕ್ಕೆ ತುತ್ತಾದ ಜಿಲ್ಲೆಗಳ ಪರಿಸ್ಥಿತಿಯ ಬಗ್ಗೆ ಸದನಕ್ಕೆ ಆಗಿರುವ ಕಳಕಳಿಯನ್ನು ನಾನು ಅರ್ಥ ಮಾಡಿಕೊಂಡಿದ್ದೇನೆ. ಮಾನ್ಯ ಸಚಿವರು ಬಂದ ತಕ್ಷಣ ಅವರು ಸದನದಲ್ಲಿ ಆ ಬಗ್ಗೆ ಹೇಳಿಕೆ ಕೊಡುವುದಕ್ಕೆ ಅವಕಾಶ ಕೊಡುತ್ತೇನೆ.

ಶ್ರೀ ಪಿ. ಜಿ. ಆರ್. ಸಿಂಧ್ಯ.— ಅವರು ಹೇಳಿಕೆ ಕೊಟ್ಟ ಮೇಲೆ ಚರ್ಚೆಗೆ ತಾವು ಅವಕಾಶ ಮಾಡಿ ಕೊಡಬೇಕು.

ಅಧ್ಯಕ್ಷರು.— ಅವರು ಹೇಳಿಕೆ ಕೊಟ್ಟ ಮೇಲೆ ತಾನೆ ಚರ್ಚೆಗೆ ಅವಕಾಶ ಕೊಡುವುದು?